ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿಗೆ ಹೆಚ್ಚುವರಿ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಸಕಇ 9 ಪವಯೋ 2010 ದಿನಾಂಕ: 26-10-2010

2. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪ್ರಸ್ತಾವನೆ ಸಂಖ್ಯೆ: ಟಿಆರ್ಐ/ಮೈ/ಸಿ.ಆರ್-60/2012-13 ದಿನಾಂಕ: 10-7-2013

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರಲ್ಲಿನ ಸರ್ಕಾರದ ಆದೇಶದಲ್ಲಿ ಮೈಸೂರಿನ ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ಒಟ್ಟು 22 ಹುದ್ದೆಗಳನ್ನು ಸೃಜಿಸಿ ಇದರ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2225-02-800-0-01 (ಯೋಜನೆ) ಅಡಿಯಲ್ಲಿ ಭರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರು ಗಿರಿಜನ ಸಂಶೋಧನಾ ಸಂಸ್ಥೆಯು ಸಂಶೋಧನೆ, ತರಬೇತಿ, ಮೌಲ್ಯಮಾಪನ, ವಿಚಾರಗೋಷ್ಠಿ/ಕಾರ್ಯಗಾರ ಕುಲಶಾಸ್ತ್ರೀಯ ಅಧ್ಯಯನ, ಇತ್ಯಾದಿ ವಿಷಯಗಳ ಬಗ್ಗೆ ಹಾಗೂ ವಿವಿಧ ಸಮುದಾಯಗಳಿಂದ ಬೇಡಿಕೆ ಬಂದಾಗ ಆಯಾ ಜಾತಿ ಪಂಗಡಗಳ ಕುಲಶಾಸ್ತ್ರೀಯ ಅಧ್ಯಯನ ಮುಂತಾದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳಬೇಕಾಗಿದ್ದು, ಹಾಲಿ ಸೃಜಿಸಲಾಗಿರುವ 22 ಹುದ್ದೆಗಳಿಂದ ಕಷ್ಟಸಾಧ್ಯವಾಗಿದ್ದು, ಸದರಿ ಸಂಸ್ಥೆಗೆ ಈ ಕೆಳಕಂಡಂತೆ ಹೆಚ್ಚುವರಿ ಹುದ್ದೆಗಳನ್ನು ಸೃಜಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| ಕ್ರಮ ಸಂಖ್ಯೆ | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ |
|---|---|---|---|
| 1. | ಲೆಕ್ಕಾಧಿಕಾರಿ/ಗೆಜೆಟೆಡ್ ಮೇನೇಜರ್ | 01 | 22800-43200 |
| 2. | ಕಛೇರಿ ಅಧೀಕ್ಷಕರು | 01 | 20000-36300 |
| 3. | ಶೀಘ್ರಲಿಪಿಗಾರರು | 02 | 14550-26700 |
| 4. | ಪ್ರಥಮ ದರ್ಜೆ ಸಹಾಯಕರು | 01 | 14550-26700 |
| 5. | ದ್ವಿತೀಯ ದರ್ಜೆ ಸಹಾಯಕರು | 01 | 11600-21000 |
| 6. | ರಾತ್ರಿ ಕಾವಲುಗಾರ | 01 | 9600-14550 |

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 177 ಪವಯೋ 2013 ಬೆಂಗಳೂರು, ದಿನಾಂಕ: 12-12-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ

ಸಂಸ್ಥೆ, ಮೈಸೂರು, ಈ ಸಂಸ್ಥೆಗೆ ಈ ಕೆಳಕಂಡ ಹುದ್ದೆಗಳನ್ನು ಸೃಜಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

| ಕ್ರಮ ಸಂಖ್ಯೆ | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1. | ಲೆಕ್ಕಾಧಿಕಾರಿ | 01 | Regular |
| 2. | ಶೀಘ್ರಲಿಪಿಗಾರರು | 01 | Outsource |
| 3. | ಪ್ರಥಮ ದರ್ಜೆ ಸಹಾಯಕರು | 01 | Regular |
| 4. | ದ್ವಿತೀಯ ದರ್ಜೆ ಸಹಾಯಕರು | 01 | Regular |
| 5. | ರಾತ್ರಿ ಕಾವಲುಗಾರ | 01 | Outsource |
| ಒಟ್ಟು | | 05 | |

ಈ ಸಂಬಂಧದ ವೆಚ್ಚವನ್ನು ರಾಜ್ಯವಲಯ ಲೆಕ್ಕ ಶೀರ್ಷಿಕೆ 2225-02-001-0-02 (ಯೋಜನೆ) ಅಡಿಯಲ್ಲಿ ಭರಿಸುವುದು. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ ಆಇ 592 ವೆಚ್ಚ-3/2013 ದಿನಾಂಕ: 30-10-2013 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎನ್. ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರಗಾರ, ಬೆಂಗಳೂರು (ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಕಳುಹಿಸಿಕೊಡುವಂತೆ ಕೋರುತ್ತಾ

**ಪ್ರತಿ:-**

(1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
(2) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿ ಭವನ, ಬೆಂಗಳೂರು.
(3) ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ನಂ.1540, ಅನಿಕೇತನ ರಸ್ತೆ, ಕುವೆಂಪು ನಗರ, ಮೈಸೂರು.
(4) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-3 & 9, ವಿಧಾನಸೌಧ, ಬೆಂಗಳೂರು.
(5) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
(6) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
(7) ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು ಜಿಲ್ಲೆ.
(8) ಶಾಖಾ ರಕ್ಷಾ ಕಡತ.
(9) ಹೆಚ್ಚುವರಿ ಪ್ರತಿ-03.